ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)/2020-21 1507

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560 001.
ದಿನಾಂಕ: 18-09-2020.

## ಹಿಂಬರಹ

ಕರ್ನಾಟಕ ಸರ್ಕಾರದ ಸುತ್ತೋಲೆಯ ಪತ್ರ ಸಂಖ್ಯೆ: ಆಇ 13 ಎಸ್‌ಆರ್‌ಪಿ 2020 ದಿನಾಂಕ: 11/08/2020 ರ ಪ್ರತಿಯನ್ನು. ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು., ಸರ್ಕಾರಿ ಪಾಲಿಟೆಕ್ನಿಕ್., ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು., ಸರ್ಕಾರಿ ಗಣಿ ಶಿಕ್ಷಣ ಶಾಲೆ., ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ. ಜಂಟಿ ನಿರ್ದೇಶಕರು(ಆಡಳಿತ). ಆಡಳಿತಾಧಿಕಾರಿ. ಸಹಾಯಕ ಆಡಳಿತಾಧಿಕಾರಿ (1). (2) ಹಾಗೂ (3). ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ.
3. ಆಯುಕ್ತರ ಆಪ್ತ ಶಾಖೆಗೆ
4. ನಿರ್ದೇಶಕರ ಆಪ್ತ ಶಾಖೆಗೆ
5. ಈ ನಿರ್ದೇಶನಾಲಯದ ಇಎಸ್‌ಟಿ(1) ರಿಂದ (10) ವಿಭಾಗಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

EST-09

617
08-09-2020

ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 13 ಎಸ್‌ಆರ್‌ಪಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು. ದಿನಾಂಕ: 11.08.2020.

## ಸುತ್ತೋಲೆ

16029/3/2020

ವಿಷಯ: ಕಾಲಿಕ ವೇತನ ಶ್ರೇಣಿಯಲ್ಲಿ ಗರಿಷ್ಠ ವೇತನ ಹಂತವನ್ನು ತಲುಪಿದ ರಾಜ್ಯ ಸರ್ಕಾರಿ ನೌಕರರಿಗೆ ಸ್ಥಗಿತ ವೇತನ ಬಡ್ತಿ ಸೌಲಭ್ಯಗಳನ್ನು ಮಂಜೂರು ಮಾಡುವ ಕುರಿತು ನಿಗದಿತ ಮಾರ್ಗಸೂಚಿಗಳನ್ನು ಅನುಸರಿಸುವ ಬಗ್ಗೆ.

ಉಲ್ಲೇಖ:
1. ದಿನಾಂಕ: 18.03.1996ರ ಸರ್ಕಾರಿ ಆದೇಶ ಸಂಖ್ಯೆ: ಆಇ 3 ಎಸ್‌ಆರ್‌ಪಿ 96.
2. ದಿನಾಂಕ: 14.06.2012ರ ಸರ್ಕಾರಿ ಆದೇಶ ಸಂಖ್ಯೆ: ಆಇ 12 ಎಸ್‌ಆರ್‌ಪಿ 2012 (VII)
3. ದಿನಾಂಕ: 19.04.2018ರ ಸರ್ಕಾರಿ ಅಧಿಸೂಚನೆ ಸಂಖ್ಯೆ: ಆಇ 6 ಎಸ್‌ಆರ್‌ಪಿ 2018.
4. ದಿನಾಂಕ:17.02.2020ರ ಸುತ್ತೋಲೆ ಸಂಖ್ಯೆ:ಆಇ 1 ಎಸ್‌ಆರ್‌ಪಿ 2020

*****

ರಾಜ್ಯ ಸರ್ಕಾರಿ ನೌಕರರು ಅವರು ಧಾರಣೆ ಮಾಡಿರುವ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಗರಿಷ್ಠ ಹಂತವನ್ನು ತಲುಪಿದ್ದಲ್ಲಿ, ಅಂತಹ ಸರ್ಕಾರಿ ನೌಕರರಿಗೆ ಸ್ಥಗಿತ ವೇತನ ಬಡ್ತಿಗಳನ್ನು ಮಂಜೂರು ಮಾಡುವ ಕುರಿತು ಉಲ್ಲೇಖ(1)ರ ದಿನಾಂಕ: 18.03.1996ರ ಸರ್ಕಾರಿ ಆದೇಶದಲ್ಲಿ ವಿಸ್ತೃತವಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ. ಅದರಂತೆ, ಆದೇಶದಲ್ಲಿ ತಿಳಿಸಿರುವ ಷರತ್ತು ಮತ್ತು ನಿಬಂಧನೆಗಳ ಪೂರೈಕೆಗೊಳಪಟ್ಟು ರಾಜ್ಯ ಸರ್ಕಾರಿ ನೌಕರರಿಗೆ ಗರಿಷ್ಠ 5 ಸ್ಥಗಿತ ವೇತನ ಬಡ್ತಿಗಳನ್ನು, ಆದೇಶದಲ್ಲಿ ತಿಳಿಸಿರುವ ಸಕ್ಷಮ ಪ್ರಾಧಿಕಾರಿಗಳು ಮಂಜೂರು ಮಾಡಬಹುದಾಗಿರುತ್ತದೆ.

2011ರ ಅಧಿಕಾರಿ ವೇತನ ಸಮಿತಿಯ ಶಿಫಾರಸ್ಸಿನಂತೆ, ಮೇಲಿನ ಉಲ್ಲೇಖ(1)ರ ಆದೇಶದನ್ವಯ ಲಭ್ಯವಿದ್ದ ಗರಿಷ್ಠ 5 ಸ್ಥಗಿತ ವೇತನ ಬಡ್ತಿಗಳ ಸಂಖ್ಯೆಯನ್ನು ಉಲ್ಲೇಖ(2)ರ ದಿನಾಂಕ: 14.06.2012ರ ಸರ್ಕಾರಿ ಆದೇಶದಲ್ಲಿ ಗರಿಷ್ಠ 8 ಸ್ಥಗಿತ ವೇತನ ಬಡ್ತಿಗಳಿಗೆ ನಿಗದಿಪಡಿಸಲಾಗಿರುತ್ತದೆ. ಅಂದರೆ, ದಿನಾಂಕ: 01.04.2012ರಿಂದ ಜಾರಿಗೆ ಬರುವಂತೆ ರಾಜ್ಯ ಸರ್ಕಾರಿ ನೌಕರರಿಗೆ ಲಭ್ಯವಿದ್ದ ಸ್ಥಗಿತ ವೇತನ ಬಡ್ತಿಗಳ ಸಂಖ್ಯೆಯನ್ನು 5 ರಿಂದ 8ಕ್ಕೆ ಪರಿಷ್ಕರಿಸಲಾಗಿದ್ದು, ಸ್ಥಗಿತ ವೇತನ ಬಡ್ತಿ ಮಂಜೂರಾತಿ ಕುರಿತಂತೆ ಉಲ್ಲೇಖ(1)ರಲ್ಲಿ ತಿಳಿಸಿರುವ ಷರತ್ತು ಮತ್ತು ನಿಬಂಧನೆಗಳು ಮುಂದುವರೆದು ಅನ್ವಯವಾಗುತ್ತವೆ.

6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ, ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳನ್ನು ದಿನಾಂಕ:01.07.2017ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಿ ಆದೇಶಗಳನ್ನು

ಹೊರಡಿಸಲಾಗಿರುತ್ತದೆ. ಉಲ್ಲೇಖ(3)ರ ದಿನಾಂಕ: 19.04.2018ರಲ್ಲಿ ಅಧಿಸೂಚಿಸಲಾದ ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳು, 2018ರ ನಿಯಮಗಳನ್ವಯ ಸರ್ಕಾರಿ ನೌಕರರ ವೇತನವನ್ನು ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ನಿಗದಿತ ಸಮಯದೊಳಗೆ ಪುನರ್ ನಿಗದಿಪಡಿಸಿ ಅವರ ಮೂಲ ಸೇವಾ ಪುಸ್ತಕದಲ್ಲಿ ಸೂಕ್ತ ರೀತಿಯಲ್ಲಿ ನಮೂದು ಮಾಡುವ ಬಗ್ಗೆ ಉಲ್ಲೇಖ(4)ರ ದಿನಾಂಕ: 17.02.2020 ಸುತ್ತೋಲೆಯಲ್ಲಿ ವಿವರವಾದ ಸೂಚನೆಗಳನ್ನು ನೀಡಲಾಗಿರುತ್ತದೆ.

ಸರ್ಕಾರಿ ನೌಕರರ ಸೇವಾ ವಿಷಯಗಳಿಗೆ ಸಂಬಂಧಿಸಿದ ಪ್ರತಿ ಹಂತದ ಪ್ರಮುಖ ಅಂಶಗಳನ್ನು ಅವರ ಮೂಲ ಸೇವಾ ಪುಸ್ತಕಗಳಲ್ಲಿ ಸೂಕ್ತ ರೀತಿಯಲ್ಲಿ ನಮೂದು ಮಾಡಬೇಕೆಂದು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳಲ್ಲಿ ಉದ್ಧೃತವಾಗಿರುತ್ತದೆ. ಈ ಬಗ್ಗೆ ಉಲ್ಲೇಖ (4)ರ ಸುತ್ತೋಲೆಯಲ್ಲಿಯೂ ಸಹ ಸೂಚನೆಗಳನ್ನು ನೀಡಲಾಗಿರುತ್ತದೆ. ಆದರೆ, ಸರ್ಕಾರಿ ನೌಕರರು ಶ್ರೇಣಿಕೃತ ವ್ಯವಸ್ಥೆಯಲ್ಲಿ ಅವರಿಗೆ ಲಭ್ಯವಿರುವ ಪದೋನ್ನತಿ ಅವಕಾಶಗಳನ್ನು ಸ್ವ ಇಚ್ಛೆಯಿಂದ ನಿರಾಕರಿಸಿದ ಬಗ್ಗೆ ಸೇವಾ ಪುಸ್ತಕದಲ್ಲಿ ನಮೂದು ಮಾಡದೇ ಇರುವುದು ಸಹ ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇದು ಸ್ಥಗಿತ ವೇತನ ಬಡ್ತಿ ಮಂಜೂರು ಮಾಡುವಲ್ಲಿ ಅನಗತ್ಯ ಗೊಂದಲಗಳಿಗೆ ಕಾರಣವಾಗುತ್ತದೆ.

ಆದಾಗ್ಯೂ, ಸರ್ಕಾರಿ ನೌಕರರಿಗೆ ಲಭ್ಯವಿರುವ ಸ್ಥಗಿತ ವೇತನ ಬಡ್ತಿ ಸೌಲಭ್ಯಗಳನ್ನು ನಿಗದಿತ ಅವಧಿಯೊಳಗೆ ಮಂಜೂರು ಮಾಡದೇ, ಸರ್ಕಾರಿ ನೌಕರರು ನಿವೃತ್ತರಾದ ನಂತರ ಪ್ರಸ್ತಾವನೆಗಳನ್ನು ಸಲ್ಲಿಸುತ್ತಿರುವುದು ಹಾಗೂ ಪದೋನ್ನತಿ ನಿರಾಕರಿಸಿದ ನೌಕರರ ಪ್ರಕರಣಗಳಲ್ಲಿಯೂ ಸಹ ಸ್ಥಗಿತ ವೇತನ ಬಡ್ತಿಗಳನ್ನು ನಿಯಮಬಾಹಿರವಾಗಿ ಮಂಜೂರು ಮಾಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುತ್ತವೆ.

ಕಾಲಿಕ ವೇತನ ಶ್ರೇಣಿಗಳಲ್ಲಿ ಲಭ್ಯವಿರುವ ವಾರ್ಷಿಕ ವೇತನ ಬಡ್ತಿ ಸೌಲಭ್ಯಗಳನ್ನು ಮಂಜೂರು ಮಾಡುವುದಕ್ಕೂ ಮತ್ತು ಕಾಲಿಕ ವೇತನ ಶ್ರೇಣಿಗಳ ಗರಿಷ್ಠ ಹಂತವನ್ನು ತಲುಪಿದ ನೌಕರರಿಗೆ ಗರಿಷ್ಠ ಹಂತವನ್ನೂ ಮೀರಿ ಮಂಜೂರು ಮಾಡುವ ಸ್ಥಗಿತ ವೇತನ ಬಡ್ತಿ ಸೌಲಭ್ಯಗಳನ್ನು ಪರಸ್ಪರ ಹೋಲಿಸಲು ಬರುವುದಿಲ್ಲ. ಈ ಸೌಲಭ್ಯಗಳ ಉದ್ದೇಶ, ಮಂಜೂರಾತಿ ಇತ್ಯಾದಿ ಅಂಶಗಳು ಪರಸ್ಪರ ಭಿನ್ನವಾಗಿರುತ್ತವೆ. ಕಾಲಿಕ ವೇತನ ಶ್ರೇಣಿಯ ಗರಿಷ್ಠ ಹಂತವನ್ನು ತಲುಪಿರುವ ಸರ್ಕಾರಿ ನೌಕರನ ಅರ್ಹತೆ ಮತ್ತು ಸೂಕ್ತತೆಯನ್ನು ಖಚಿತಪಡಿಸಿಕೊಂಡ ಬಳಿಕವಷ್ಟೇ ಸ್ಥಗಿತ ವೇತನ ಬಡ್ತಿಗಳನ್ನು ಮಂಜೂರು ಮಾಡುವುದು ಸರಿಯಾದ ಕ್ರಮವಾಗಿರುತ್ತದೆ. ಪರಂತು, ಇದನ್ನು ಸರ್ವೇ ಸಾಮಾನ್ಯವಾಗಿ ಕಾಲಿಕ ವೇತನ ಶ್ರೇಣಿಯಲ್ಲಿ ಲಭ್ಯವಿರುವ ವಾರ್ಷಿಕ ವೇತನ ಬಡ್ತಿಗಳಂತೆ ಪರಿಗಣಿಸಿ ಪ್ರತಿ ವರ್ಷ ಮಂಜೂರು ಮಾಡುವುದು ಸ್ಥಗಿತ ವೇತನ ಬಡ್ತಿ ಸೌಲಭ್ಯಗಳ ಮಂಜೂರಾತಿಯ ಉದ್ದೇಶ ಮತ್ತು ಉಲ್ಲೇಖ(1)ರ ಆದೇಶದ ಮಾರ್ಗಸೂಚಿಗಳಿಗೆ ವ್ಯತಿರಿಕ್ತವಾದ ನಿರ್ಣಯವಾಗುತ್ತದೆ.

ಉಲ್ಲೇಖ(1)ರಲ್ಲಿ ತಿಳಿಸಿರುವ ದಿನಾಂಕ: 18.03.1996ರ ಆದೇಶದಲ್ಲಿನ ಮಾರ್ಗಸೂಚಿಗಳಂತೆ ಸ್ಥಗಿತ ವೇತನ ಬಡ್ತಿ ಸೌಲಭ್ಯಗಳನ್ನು ಮಂಜೂರು ಮಾಡಲು ಸರ್ಕಾರಿ ನೌಕರನು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳನ್ನು ಪೂರೈಸಿರತಕ್ಕದ್ದು:

1. ಸರ್ಕಾರಿ ನೌಕರನು ತೃಪ್ತಿಕರವಾದ ಸೇವಾ ದಾಖಲೆಗಳನ್ನು ಹೊಂದಿರಬೇಕು.
2. ಸ್ಥಗಿತ ವೇತನ ಬಡ್ತಿ ಸೌಲಭ್ಯದ ಮಂಜೂರಾತಿಗಾಗಿ ತೃಪ್ತಿಕರ ಸೇವೆಯನ್ನು ಪದೋನ್ನತಿಗೆ ನಿರ್ಧರಿಸುವ ರೀತಿಯಲ್ಲಿಯೇ ಪರಿಗಣಿಸಿ ನಿರ್ಧರಿಸತಕ್ಕದ್ದು.

3. ಶ್ರೇಣೀಕೃತ ವ್ಯವಸ್ಥೆಯಲ್ಲಿನ ಪದೋನ್ನತಿ ಅವಕಾಶಗಳನ್ನು ನಿರಾಕರಿಸಲ್ಪಟ್ಟ ಅಥವಾ ಸ್ವ-ಇಚ್ಛೆಯಿಂದ ಪದೋನ್ನತಿಯನ್ನು ಬಿಟ್ಟುಕೊಟ್ಟ ಸರ್ಕಾರಿ ನೌಕರರ ಪ್ರಕರಣಗಳಲ್ಲಿ ಸ್ಥಗಿತ ವೇತನ ಬಡ್ತಿಗಳನ್ನು ಮಂಜೂರು ಮಾಡುವಂತಿಲ್ಲ.

ಆದುದರಿಂದ, ಸರ್ಕಾರಿ ನೌಕರರಿಗೆ ಸ್ಥಗಿತ ವೇತನ ಬಡ್ತಿಗಳನ್ನು ಮಂಜೂರು ಮಾಡುವಲ್ಲಿ ಈ ಕುರಿತು ಸಂಬಂಧಿಸಿದ ಸರ್ಕಾರಿ ನೌಕರರಿಂದ ಲಿಖಿತ ಮನವಿ ಸ್ವೀಕೃತವಾದ ಕೂಡಲೇ ಸಕ್ಷಮ ಪ್ರಾಧಿಕಾರಿಗಳು ಈ ಮೇಲಿನ ಸೂಚನೆ ಮತ್ತು ಉಲ್ಲೇಖ(1)ಮತ್ತು (2) ರ ಸರ್ಕಾರಿ ಆದೇಶಗಳಲ್ಲಿನ ಮಾರ್ಗಸೂಚಿಗಳ ಪ್ರಕಾರ ನಿಯಮಾನುಸಾರ ಪರಿಶೀಲಿಸಿ ಸೂಕ್ತ ನಿರ್ಧಾರ ಕೈಗೊಳ್ಳತಕ್ಕದ್ದು.

ಒಂದೊಮ್ಮೆ, ನಿವೃತ್ತಿಯ ಅಂಚಿನಲ್ಲಿರುವ ನೌಕರರ ಪ್ರಕರಣಗಳಲ್ಲಿ, ಸ್ಥಗಿತ ವೇತನ ಬಡ್ತಿಗಳನ್ನು ಮಂಜೂರು ಮಾಡುವ ಮೊದಲು, ಮಂಜೂರಾತಿಯ ಕೋರಿಕೆಯು ವಿಳಂಬವಾಗಿ ಸಲ್ಲಿಕೆಯಾಗಿದ್ದಲ್ಲಿ, ವಿಳಂಬಕ್ಕೆ ಸಕಾರಣಗಳನ್ನು ದಾಖಲಿಸಿ ನೌಕರನು ನಿವೃತ್ತಿಯಾಗುವ ಮೊದಲೇ ಮಂಜೂರು ಮಾಡಲು ಆದ್ಯತೆಯ ಮೇಲೆ ನಿಯಮಾನುಸಾರ ಕ್ರಮ ಕೈಗೊಳ್ಳತಕ್ಕದ್ದು. ಇಂತಹ ಸಂದರ್ಭಗಳಲ್ಲಿ ನಿರ್ಧಾರ ಕೈಗೊಳ್ಳಲು ವಿಳಂಬವಾದಲ್ಲಿ ಅಂತಹ ಪ್ರಕರಣಗಳನ್ನು ನಿವೃತ್ತಿ ದಿನಾಂಕದಿಂದ ಗರಿಷ್ಠ ಒಂದು ವರ್ಷದೊಳಗೆ ಇತ್ಯರ್ಥಗೊಳಿಸಲು ಕ್ರಮವಹಿಸತಕ್ಕದ್ದು.

ನಿವೃತ್ತ ಸರ್ಕಾರಿ ನೌಕರರ ಪ್ರಕರಣಗಳಲ್ಲಿ, ಅವರು ನಿವೃತ್ತರಾದ ಒಂದು ವರ್ಷದ ನಂತರ ಬಹಳ ತಡವಾಗಿ ಸ್ವೀಕೃತವಾಗುವ ಮನವಿಗಳನ್ನು ಪರಿಶೀಲಿಸಿ, ವಿಳಂಬಕ್ಕೆ ಸಕಾರಣಗಳನ್ನು ದಾಖಲಿಸಿ ಸ್ಥಗಿತ ವೇತನ ಬಡ್ತಿಗಳನ್ನು ಮಂಜೂರು ಮಾಡುವ ಬಗ್ಗೆ ನಿಯಮಾನುಸಾರ ಕ್ರಮವಹಿಸತಕ್ಕದ್ದು. ಪರಂತು, ಒಂದು ವರ್ಷದ ನಂತರ ಸ್ವೀಕೃತವಾಗುವ ಮನವಿಗಳನ್ನು ನಿರ್ದಿಷ್ಟ ಸಕಾರಣಗಳಿಲ್ಲದೇ ಪುರಸ್ಕರಿಸತಕ್ಕದ್ದಲ್ಲ.

ಮುಂದುವರೆದು, ನೌಕರರು ನಿವೃತ್ತರಾದ ಬಹಳ ವರ್ಷಗಳ ನಂತರ ಸ್ಥಗಿತ ವೇತನ ಬಡ್ತಿ ಸೌಲಭ್ಯಗಳನ್ನು ಮಂಜೂರು ಮಾಡುವಂತೆ ಸಲ್ಲಿಸುವ ಮನವಿಗಳನ್ನು ಪರಿಶೀಲಿಸಿ ಅನಗತ್ಯ ವಿಳಂಬಕ್ಕೆ ಕಾರಣಗಳನ್ನು ಪರಿಶೀಲಿಸಿದ ನಂತರ ಸೌಲಭ್ಯವನ್ನು ಮಂಜೂರು ಮಾಡಲೇಬೇಕಾದಂತಹ ಸಂದರ್ಭಗಳಲ್ಲಿ ಸೂಕ್ತ ಸಮರ್ಥನೆ ಮತ್ತು ವಿಳಂಬಕ್ಕೆ ಸಕಾರಣಗಳನ್ನು ನಮೂದಿಸಿ ಆರ್ಥಿಕ ಇಲಾಖೆಯ ಅನುಮೋದನೆಯನ್ನು ಪಡೆಯತಕ್ಕದ್ದು. ಪರಂತು, ಈ ನಿಬಂದನೆಯು ಸೇವಾವಧಿಯಲ್ಲಿ ಮಂಜೂರು ಮಾಡುವ ಸ್ಥಗಿತ ವೇತನ ಬಡ್ತಿ ಪ್ರಕರಣಗಳಿಗೆ ಅನ್ವಯಿಸುವುದಿಲ್ಲ. ಈ ಬಗ್ಗೆ ಸಂಬಂಧಿಸಿದ ಪ್ರಾಧಿಕಾರಿಗಳು ಸೂಕ್ತ ನಿರ್ಣಯ ಕೈಗೊಳ್ಳಬಹುದಾಗಿರುತ್ತದೆ.

ಒಂದು ವೇಳೆ ಈ ಮೇಲೆ ತಿಳಿಸಿರುವ ಸೂಚನೆ ಮತ್ತು ಮಾರ್ಗಸೂಚಿಗಳನ್ನು ಉಲ್ಲಂಘಿಸಿ ನಿಯಮಬಾಹಿರವಾಗಿ ಸ್ಥಗಿತ ವೇತನ ಬಡ್ತಿಗಳನ್ನು ಮಂಜೂರು ಮಾಡಿದಲ್ಲಿ ಅದಕ್ಕೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರಿಗಳೇ ಜವಾಬ್ದಾರಿಯಾಗುತ್ತವೆ.

**ಇಲಾಖಾ ಹಂತಗಳಲ್ಲಿ ದಿನಾಂಕ: 01-04-2020ರಂದು ಮತ್ತು ಪ್ರಸ್ತುತ ಬಾಕಿ ಇರುವ ಸ್ಥಗಿತ ವೇತನ ಬಡ್ತಿ ಪ್ರಕರಣಗಳನ್ನು ಈ ಮೇಲಿನ ಸೂಚನೆಗಳ ಬೆಳಕಿನಲ್ಲಿ ಪರಿಶೀಲಿಸಿ 6 ತಿಂಗಳೊಳಗಾಗಿ ನಿಯಮಾನುಸಾರ ಕ್ರಮ ಕೈಗೊಳ್ಳುವ ಬಗ್ಗೆ ಜರೂರು ನಿರ್ಧಾರ ಕೈಗೊಳ್ಳಲು ಸಂಬಂಧಿಸಿದ ಸಕ್ಷಮ ಪ್ರಾಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಎಲ್ಲಾ ಇಲಾಖಾ ಮುಖ್ಯಸ್ಥರು / ಸರ್ಕಾರದ ಕಾರ್ಯದರ್ಶಿಗಳನ್ನು ಕೋರಿದೆ.**

ಈ ಮೇಲಿನ ಸೂಚನೆಗಳನ್ನು ಸ್ಥಗಿತ ವೇತನ ಬಡ್ತಿ ಮಂಜೂರು ಮಾಡುವ ಪ್ರಾಧಿಕಾರಿಗಳ ಗಮನಕ್ಕೆ ತರುವಂತೆ ಮತ್ತು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಸೂಕ್ತ ಕ್ರಮವಹಿಸುವಂತೆ ಎಲ್ಲಾ ಇಲಾಖಾ ಮುಖ್ಯಸ್ಥರನ್ನು ಮತ್ತು ಇಲಾಖಾ ಕಾರ್ಯದರ್ಶಿಗಳನ್ನು ಕೋರಿದೆ.

(ಡಾ:ಪಿ.ಸಿ.ಜಾಫರ್)
ಸರ್ಕಾರದ ಕಾರ್ಯದರ್ಶಿ(ವೆಚ್ಚ)
ಆರ್ಥಿಕ ಇಲಾಖೆ

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398), ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398), ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್‌ರಸ್ತೆ, (ಪಿ.ಬಿ. ನಂ.5329), ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿಕಟ್ಟಡ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
8. ಎಲ್ಲಾ ಪ್ರಾದೇಶಿಕ ಆಯುಕ್ತರು.
9. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
10. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
11. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
12. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
13. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
14. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
15. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
18. ಪ್ರಾಜೆಕ್ಟ್‌ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145‘A’, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
20. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
21. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.karnataka.gov.in ವೀಕ್ಷಿಸಿ.**